ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "1999ರ ಕರ್ನಾಟಕ ತೆರಿಗೆ ಕಾನೂನುಗಳು (ಮೂರನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 6ರವರೆಗೆ

ಅಧ್ಯಕ್ಷರು : "ಖಂಡ 2ರಿಂದ 6ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 6ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಉಪಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1999ರ ಕರ್ನಾಟಕ ತೆರಿಗೆ ಕಾನೂನುಗಳು (ಮೂರನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, ``1999ರ ಕರ್ನಾಟಕ ತೆರಿಗೆ ಕಾನೂನುಗಳು (ಮೂರನೇತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ1999ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು, ಮಾನ್ಯ ಉನ್ನತ ಶಿಕ್ಷಣ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ

ರೂಪದಲ್ಲಿರುವ 1999 ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ " ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 6 ರವರೆಗೆ

ಅಧ್ಯಕ್ಷರು : "ಖಂಡ 2 ರಿಂದ 6 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 6 ರವರೆಗೆ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ : 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಉನ್ನತ ಶಿಕ್ಷಣ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999,ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999 ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಅಂತರ್ಜಲ (ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕ, 1999

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999 ಕರ್ನಾಟಕ ಅಂತರ್ಜಲ (ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು ; ಪ್ರಸ್ತಾವ ಏನೆಂದರೆ, "ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999 ಕರ್ನಾಟಕ ಅಂತರ್ಜಲ (ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 21ರವರೆಗೆ

ಅಧ್ಯಕ್ಷರು :" ಖಂಡ 2 ರಿಂದ 21ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(2 ರಿಂದ 21ರವರೆಗೂ ಸೇರಿದಂತೆ ವಿಧೇಯಕ್ಕೆ ಸೇರಿಸಲಾಯಿತು)

ಖಂಡ: ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,